ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂಸತ್

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 07/03/2020

# ಕಲಾಪದಿಂದ ಸ್ಪೀಕರ್ ದೂರ

- ಸಂಸದರ ವರ್ತನೆಯಿಂದ ಬೇಸತ್ತು ಈ ನಿರ್ಧಾರ
- ಮನವೊಲಿಕೆಗೂ ಬಗ್ಗದ ಓಂ ಬಿರ್ಲಾ

ನವದೆಹಲಿ: ದೆಹಲಿ ಗಲಭೆ ಹಾಗೂ ಇತರೆ ವಿಚಾರಗಳಿಗೆ ಸಂಬಂಧಿಸಿ ಪ್ರತಿಪಕ್ಷಗಳ ನಿರಂತರ ಪ್ರತಿಭಟನೆ ಮುಂದುವರಿದ ಕಾರಣ ಶುಕ್ರವಾರವೂ ಸಂಸತ್‌ನ ಎರಡೂ ಸದನಗಳ ಕಲಾಪ ವ್ಯರ್ಥವಾಯಿತು. ಲೋಕಸಭೆ ಹಾಗೂ ರಾಜ್ಯಸಭೆಯಲ್ಲಿ ಕಾಂಗ್ರೆಸ್ ಸೇರಿದಂತೆ ಪ್ರತಿಪಕ್ಷಗಳು ಗದ್ದಲ ವೆಬ್ಬಿಸಿದ ಹಿನ್ನೆಲೆಯಲ್ಲಿ ಕಲಾಪಗಳನ್ನು ಮಾ.11ಕ್ಕೆ ಮುಂದೂಡಲಾಯಿತು.

ಇನ್ನು ಸೋಮವಾರದಿಂದಲೂ ಸಂಸದರ ವರ್ತನೆಯಿಂದ ಬೇಸತ್ತಿರುವ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ಕಲಾಪದಿಂದ ದೂರ ಉಳಿದಿದ್ದು ಅವರ ಮನವೊಲಿಕೆ ಯತ್ನವೂ ವಿಫಲವಾಗಿದೆ. ಸತತ 3 ದಿನಗಳಿಂದಲೂ ಬಿರ್ಲಾ ಅವರು ಕಲಾಪಕ್ಕೆ ಹಾಜರಾಗದೇ, ತಮ್ಮ ಕಚೇರಿಯಿಂದಲೇ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಶುಕ್ರವಾರವೂ ಅವರು ಸದನಕ್ಕೆ ಆಗಮಿಸಲಿಲ್ಲ. ಕೊನೆಗೆ ಸರ್ವಪಕ್ಷಗಳ ನಿಯೋಗವೊಂದು ತೆರಳಿ, ಅವರನ್ನು ಸದನಕ್ಕೆ ಬರುವಂತೆ ಕೇಳಿಕೊಂಡರೂ ಅವರು ಒಪ್ಪಲಿಲ್ಲ. ಎಲ್ಲ ಸದಸ್ಯರೂ ಶಿಸ್ತಿನಿಂದ ವರ್ತಿಸಿ, ಸುಗಮ ಕಲಾಪಕ್ಕೆ ಅನುವು ಮಾಡಿಕೊಡುವವರೆಗೂ ನಾನು ಕಲಾಪದಲ್ಲಿ ಪಾಲ್ಗೊಳ್ಳಲ್ಲ ಎಂದು ಅವರು ಹೇಳಿದ್ದಾರೆ ಎನ್ನಲಾಗಿದೆ.

ಇದೇ ವೇಳೆ, ಶುಕ್ರವಾರ ಕೋಲಾಹಲದ ನಡುವೆಯೇ ದಿವಾಳಿತನ ಸಂಹಿತೆ (ಎರಡನೇ ತಿದ್ದುಪಡಿ) ವಿಧೇಯಕ ಹಾಗೂ ಖನಿಜ ಕಾನೂನು(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಲಾಯಿತು.

ಇದಕ್ಕೂ ಮುನ್ನ ಪಕ್ಷದ 7 ಸಂಸದರನ್ನು ಅಮಾನತುಗೊಳಿಸಿದ ನಿರ್ಧಾರ ಖಂಡಿಸಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಪಕ್ಷದ ಸಂಸದರು ಕಪ್ಪುಪಟ್ಟಿ ಧರಿಸಿಕೊಂಡು ಸಂಸತ್ ಭವನದ ಆವರಣದಲ್ಲಿ ಪ್ರತಿಭಟನೆ ನಡೆಸಿದರು.